ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2013–14 : ಅಕ್ಟೋಬರ್ 29, 2014

ಪತ್ರಿಕಾ ಪ್ರಕಟಣೆ

# ವಿ. ಎಸ್. ಕೌಜಲಗಿ ಅವರ ನಿಧನಕ್ಕೆ ಮುಖ್ಯಮಂತ್ರಿ ಶೋಕ

ಬೆಂಗಳೂರು, ಅಕ್ಟೋಬರ್ 29 (ಕರ್ನಾಟಕ ವಾರ್ತೆ) :

ರಾಜ್ಯ ವಿಧಾನ ಸಭೆಯ ಮಾಜಿ ಸಭಾಧ್ಯಕ್ಷ, ಮಾಜಿ ಸಚಿವ ಹಾಗೂ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಮಾಜಿ ಅಧ್ಯಕ್ಷ ಶ್ರೀ ವಿ. ಎಸ್. ಕೌಜಲಗಿ ಅವರ ನಿಧನಕ್ಕೆ ಮುಖ್ಯಮಂತ್ರಿ ಶ್ರೀ ಸಿದ್ಧರಾಮಯ್ಯ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ಭಾರತೀಯ ನೌಕಾಪಡೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದ ಶ್ರೀ ಕೌಜಲಗಿ ಅವರು ರಾಜಕಾರಣದಲ್ಲೂ ಶಿಸ್ತಿನ ಸಿಪಾಯಿಯಾಗಿಯೇ ಮುಂದುವರೆದಿದ್ದರು. ಅರೆಭಾವಿ ಕ್ಷೇತ್ರದಲ್ಲಿ ಗೆಲುವಿನ ಮೇಲೆ ಗೆಲುವು ಕಂಡಿದ್ದ ಶ್ರೀ ಕೌಜಲಗಿ ಅವರು ಸದಾ ಗೆಲುವಿನ ಮೊಗದಲ್ಲಿಯೇ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಮುನ್ನಡೆಯುತ್ತಿದ್ದರು. ಬೆಳಗಾವಿ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಯ ಬಗ್ಗೆ ಅಪಾರ ಕನಸುಗಳನ್ನು ಕಂಡಿದ್ದ ಶ್ರೀ ಕೌಜಲಗಿ ಅವರು ಅವುಗಳನ್ನು ನನಸು ಮಾಡುವಲ್ಲಿಯೂ ಬಹುತೇಕ ಯಶಸ್ಸು ಕಂಡಿದ್ದರು ಎಂದು ಶ್ರೀ ಸಿದ್ದರಾಮಯ್ಯ ಅವರು ಬಣ್ಣಿಸಿದ್ದಾರೆ.

ಶ್ರೀ ಕೌಜಲಗಿ ಅವರ ಆತ್ಮಕ್ಕೆ ಶಾಂತಿ ಕರುಣಿಸುವಂತೆಯೂ, ಅವರ ಕುಟುಂಬ ವರ್ಗಕ್ಕೆ ಅವರ ಅಗಲಿಕೆಯಿಂದ ಉಂಟಾಗಿರುವ ದುಃಖ ಭರಿಸುವ ಶಕ್ತಿ ನೀಡುವಂತೆಯೂ ಶ್ರೀ ಸಿದ್ಧರಾಮಯ್ಯ ಅವರು ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

*********

ಡಿ ಪಿ ಎಂ